# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 246

ಸದಸ್ಯರ ಹೆಸರು : ಶ್ರೀ ಮುನಿರಾಜು ಗೌಡ ಪಿ.ಎಂ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 14.12.2021

ಉತ್ತರಿಸುವವರು : ಮಾನ್ಯ ಗಣಿ ಮತ್ತು ಭೂವಿಜ್ಞಾನ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಬಳ್ಳಾರಿ, ತುಮಕೂರು ಮತ್ತು ಚಿತ್ರದುರ್ಗ ಈ ಜಿಲ್ಲೆಗಳ ಗಣಿಭಾದಿತ ಪ್ರದೇಶಗಳಲ್ಲಿ ಗಣಿ ಪರಿಸರ ಪುನಶ್ಚೇತನಕ್ಕಾಗಿ ಗಣಿ ನಿಗಮವನ್ನು ಸ್ಥಾಪನೆ ಮಾಡಲಾಗಿದೆಯೇ, ಹಾಗಿದ್ದಲ್ಲಿ ಯಾವಾಗ ಸ್ಥಾಪನೆ ಮಾಡಲಾಗಿದೆ, ಸದರಿ ನಿಗಮ ಸ್ಥಾಪಿತವಾದ ಉದ್ದೇಶವೇನು; | ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶದನ್ವಯ, ರಾಜ್ಯದ ಬಳ್ಳಾರಿ, ಚಿತ್ರದುರ್ಗ ಮತ್ತು ತುಮಕೂರು ಜಿಲ್ಲೆಗಳಲ್ಲಿನ ಗಣಿಭಾದಿತ ಪ್ರದೇಶಗಳ ಪುನಃಶ್ಚೇತನದ ಕಾಲಮಿತಿ ಯೋಜನೆಗಳ ಅನುಷ್ಠಾನ/ ಮೇಲುಸ್ತುವಾರಿಗಾಗಿ ವಿಶೇಷ ಉದ್ದೇಶಗಳ ನಿಗಮ (SPV) ಎಂದು, ಕರ್ನಾಟಕ ಗಣಿ ಪರಿಸರ ಪುನಃಶ್ಚೇತನ ನಿಗಮವನ್ನು ಕಂಪನಿ ಕಾಯಿದೆ (8) ರಡಿಯಲ್ಲಿ ಜೂನ್, 2014 ರಲ್ಲಿ ಸ್ಥಾಪಿಸಲಾಗಿರುತ್ತದೆ. |
| ಆ) | ಸದರಿ ನಿಗಮದಲ್ಲಿ ಹಾಲಿ ಎಷ್ಟು ಅಧಿಕಾರಿ / ಸಿಬ್ಬಂದಿಗಳು ಕಾರ್ಯ ನಿರ್ವಹಿಸುತ್ತಿದ್ದಾರೆ; | ನಿಗಮದಲ್ಲಿ ಪ್ರಸ್ತುತ 04 ಅಧಿಕಾರಿಗಳು ಮತ್ತು 06 ಸಿಬ್ಬಂದಿಗಳು ಕೆಲಸ ನಿರ್ವಹಿಸುತ್ತಿದ್ದಾರೆ. |
| ಇ) | ಸದರಿ ನಿಗಮದಿಂದ ಇಲ್ಲಿಯವರೆಗೆ ಗಣಿ ಪರಿಸರ ಪುನಶ್ಚೇತನಕ್ಕಾಗಿ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶದನ್ವಯ, ರಾಜ್ಯದ ಬಳ್ಳಾರಿ, ಚಿತ್ರದುರ್ಗ ಮತ್ತು ತುಮಕೂರು ಜಿಲ್ಲೆಗಳ ಗಣಿಗಾರಿಕೆಯಿಂದ ಬಾಧಿತವಾದ ಪ್ರದೇಶಗಳ ಪರಿಸರ ಅಭಿವೃದ್ಧಿ, ಸಮುದಾಯಗಳ ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿ ಮತ್ತು ಗಣಿಗಾರಿಕೆಗೆ ಅವಶ್ಯಕವಾಗಿರುವ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಸಂಬಂಧಿಸಿದಂತೆ ವಿವಿಧ ಇಲಾಖೆಗಳು ಕೈಗೊಳ್ಳಲು ಉದ್ದೇಶಿಸಿರುವ ಕಾರ್ಯ ಚಟುವಟಿಕೆಗಳನ್ನು ಜಿಲ್ಲಾಡಳಿತ ಗುರುತಿಸಿ ಸರ್ಕಾರದ ಮಟ್ಟದಲ್ಲಿ ಕ್ರೊಡೀಕರಿಸಿ, ಒಟ್ಟು ರೂ.24.996.71 ಕೋಟಿ ಮೊತ್ತದ Comprehensive Environment Plan for Mining Impact Zone (CEPMIZ) ಎಂಬ ಯೋಜನೆಯನ್ನು ತಯಾರಿಸಿ ಅಕ್ಟೋಬರ್, 2018 ರಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಅನುಮೋದನೆಗಾಗಿ ಸಲ್ಲಿಸಲಾಗಿದೆ. |